# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

### ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2048 (2405)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾದ ಪ್ರವಾಸಿ ತಾಣಗಳ ಬಗ್ಗೆ

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾದ ಪ್ರವಾಸಿ ತಾಣಗಳು ಯಾವುವು ; ಇವುಗಳ ಕುರಿತು ಅಂತರ್ಜಾಲದ ಮೂಲಕ ಮಾಹಿತಿಯನ್ನು ಒದಗಿಸಲು ಇಲಾಖೆಯಿಂದ ಕ್ರಮ ವಹಿಸಲಾಗಿದೆಯೇ ;

(ಆ) ಈ ಪ್ರವಾಸಿ ತಾಣಗಳನ್ನು ಪ್ರವಾಸಿ ಸ್ನೇಹಿಯಾಗಿಸಲು ಯಾವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ; ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿಗೆ ಮೀಸಲಿರಿಸಿದ ಅನುದಾನ ಹಾಗೂ ಬಿಡುಗಡೆಯಾದ ಅನುದಾನವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯನ್ನು ಟೂರಿಸಂ ಹಬ್ ಆಗಿಸಲು ಯೋಜನೆ ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ, ಯೋಜನೆಯ ಅಂದಾಜು ಮೊತ್ತ ಎಷ್ಟು ಹಾಗೂ ಯೋಜನೆಯನ್ನು ಅನುಷ್ಠಾನಗೊಳಿಸುವುದು ಯಾವಾಗ ? (ವಿವರ ನೀಡುವುದು)